# ಕರ್ನಾಟಕ ವಿಧಾನ ಪರಿಷತ್

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 150 (166)
2. ಸದಸ್ಯರ ಹೆಸರು : ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು)
3. ಉತ್ತರಿಸುವ ದಿನಾಂಕ : 14.02.2023
4. ಉತ್ತರಿಸುವ ಸಚಿವರು : ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕೆ.ಐ.ಎ.ಡಿ.ಬಿ. ವತಿಯಿಂದ ಕಾರ್ಖಾನೆ ಸ್ಥಾಪಿಸಲು ನೀಡಿರುವ ನಿವೇಶನವನ್ನು ಹಿಂಪಡೆಯುವ ಪ್ರಕ್ರಿಯೆ ಆರಂಭವಾಗಿದೆಯೇ; (ಹೌದಾದಲ್ಲಿ, ವಿವರ ನೀಡುವುದು) | ಹೌದು.<br>ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳ ವತಿಯಿಂದ ಕೈಗಾರಿಕೆ ಸ್ಥಾಪಿಸಲು ಹಂಚಿಕೆ ಪಡೆದ ಉದ್ದಿಮೆದಾರರು ಹಂಚಿಕೆ ನಿಯಮಾವಳಿಗಳನ್ವಯ ಉದ್ದೇಶಿತ ಯೋಜನೆಯನ್ನು ನಿಗಧಿತ ಅವಧಿಯಲ್ಲಿ ಯೋಜನೆ ಅನುಷ್ಠಾನಗೊಳಸಲು ವಿಫಲವಾಗಿರುವ ಪ್ರಕರಣಗಳಗೆ ಕೆ.ಐ.ಎ.ಡಿ. ಕಾಯ್ದೆ ಕಲಂ 34-ಬಿ ರಡಿ ಜಮೀನು ಹಿಂಪಡೆಯಲು ಕ್ರಮ ಜರುಗಿಸಲಾಗುತ್ತಿದೆ. |
| (ಆ) | ಕೆ.ಐ.ಎ.ಡಿ.ಬಿ. ವತಿಯಿಂದ ನೀಡಿರುವ ನಿವೇಶನಗಳಗೆ ಮೂಲ ಸೌಕರ್ಯಗಳನ್ನು ಕಲ್ಪಿಸದೇ ಕಟ್ಟಡ ನಿರ್ಮಾಣ ಮಾಡಲು ಕಾರ್ಖಾನೆ ಮಾಲೀಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕೆ.ಐ.ಎ.ಡಿ.ಬಿ.ಯು ಅಭಿವೃದ್ಧಿಪಡಿಸುತ್ತಿರುವ ಕೈಗಾರಿಕಾ ಪ್ರದೇಶಗಳಲ್ಲಿ ಭೂಸ್ವಾಧೀನಕ್ಕೆ ಸಂಬಂಧಿಸಿದ ಮತ್ತು ನ್ಯಾಯಾಲಯಗಳಲ್ಲಿನ ವ್ಯಾಜ್ಯಗಳಂದ ಉಂಟಾದ ಹಾಗೂ ಇನ್ನಿತರೆ ಸಮಸ್ಯೆಗಳಂದ ಮೂಲ ಸೌಲಭ್ಯಗಳನ್ನು ಒದಗಿಸುವಲ್ಲಿ ವಿಳಂಬವಾಗಿರುವ ಪ್ರಕರಣಗಳಲ್ಲಿ ಕಟ್ಟಡ ನಿರ್ಮಾಣ ಮಾಡಲು ಹೆಚ್ಚುವರಿ ಕಾಲಾವಕಾಶ ನೀಡಲಾಗುತ್ತಿದೆ. |

| | | |
|---|---|---|
| (ಇ) | ಕಳೆದ 02 ವರ್ಷಗಳಿಂದ ಕೋವಿಡ್ ಕಾರಣದಿಂದಾಗಿ ಹಣಕಾಸಿನ ತೊಂದರೆ ಇರುವ ಕಾರಣ ಉದ್ದಿಮೆದಾರರಿಗೆ ಕಾಲಾವಕಾಶ ನೀಡುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಕೋವಿಡ್-19 ಸಾಂಕ್ರಾಮಿಕ ರೋಗ ಸಂಬಂಧ ಲಾಕ್‌ಡೌನ್ ಇದ್ದ ಕಾರಣ, 2020ರ ಮಾರ್ಚ್, ಏಪ್ರಿಲ್ ಹಾಗೂ ಮೇ ತಿಂಗಳುಗಳಲ್ಲಿ ಹಂಚಿಕೆದಾರರು ಮಂಡಳಿಗೆ ಪಾವತಿಸಬೇಕಾದ ನಿವೇಶನದ ಮೊತ್ತವನ್ನು ಪಾವತಿಸದಿದ್ದಲ್ಲಿ, ಅಂತಹ ಕೈಗಾರಿಕೆಗಳಿಗೆ 3 ತಿಂಗಳ ಅವಧಿಗೆ ಪಾವತಿಯನ್ನು ಮುಂದೂಡಿದ್ದು ಈ ಅವಧಿಗೆ ಬಡ್ಡಿ ವಿಧಿಸಿರುವುದಿಲ್ಲ.<br><br>ಮುಂದುವರೆದು, ದಿನಾಂಕ: 01.06.2020 ರಿಂದ ದಿನಾಂಕ: 30.06.2021 ರವರೆಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಉದ್ದಿಮೆದಾರರಿಗೆ ಹಂಚಿಕೆ ಮಾಡಿರುವ ನಿವೇಶನಗಳ ಬಾಕಿ ಮೊತ್ತ ಪಾವತಿಸುವಲ್ಲಿ ವಿಳಂಬವಾಗಿರುವ ಪ್ರಕರಣಗಳಲ್ಲಿ ಬಡ್ಡಿ ಮನ್ನಾ ಮಾಡುವ ಕುರಿತು ಬಡ್ಡಿಯ ವಿವರಗಳನ್ನು ಕ್ರೋಢೀಕರಿಸಿ ಸಮಾಜ ಕಲ್ಯಾಣ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲು ಕ್ರಮವಹಿಸಲಾಗುತ್ತಿದೆ. |

ಸಂಖ್ಯೆ: ಸಿಐ 16 ಐಎಪಿ (ಇ) 2023

(ಡಾ॥ ಮುರುಗೇಶ ಆರ್. ನಿರಾಣಿ)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು